ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1235
ಸದಸ್ಯರ ಹೆಸರು	:	ಶ್ರೀ ಗೋವಿಂದರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	17-03-2021
ಉತ್ತರಿಸುವ ಸಚಿವರು	:	ಮಾನ್ಯ ಕಂದಾಯ ಸಚಿವರು

ಪ್ರಶ್ನೆ	ಉತ್ತರ
(ಅ) ಕಳೆದ 3 ವರ್ಷಗಳಿಂದ ಮಲೆನಾಡು ಪ್ರದೇಶಗಳಲ್ಲಿ ಅತೀವೃಷ್ಟಿ ಹಾಗೂ ಅಕಾಲಿಕ ಮಳೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಆ) ಹಾಗಿದ್ದಲ್ಲಿ, ಈ ಮಲೆನಾಡು ಪ್ರದೇಶಗಳಲ್ಲಿ ಬೆಳೆಯುವ ಕಾಫಿ, ಅಡಿಕೆ, ಕಾಳುಮೆಣಸು, ಏಲಕ್ಕಿ ಬೆಳೆಗಳನ್ನು ಬೆಳೆಯುವ ಬೆಳೆಗಾರರು ಸಂಪೂರ್ಣ ನಷ್ಟ ಹೊಂದುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	
(ಇ) ಈ ವರ್ಷ ಒಂದೆಡೆ ಅಪಾರ ಮಳೆಯಿಂದ ಬೆಳೆದಂತಹ ಕಾಫಿ ಉದುರಿದರೆ ಮತ್ತೊಂದೆಡೆ ಜನವರಿ ಮತ್ತು ಫೆಬ್ರವರಿ ತಿಂಗಳಲ್ಲಿ ಅಕಾಲಿಕ ಮಳೆಯಿಂದ ಹಣ್ಣಾದ ಕಾಫಿ ಉದುರಿ ಹೋಗಿ ಮತ್ತೊಂದೆಡೆ ಅವಧಿ ಮುಂಚೆಯೇ ಹೂ ಅರಳಿ ಮುಂದಿನ ವರ್ಷದ ಬೆಳೆಯು ಸಹ ಇಲ್ಲದಂತಾಗಿ ಕಾಫಿ ಬೆಳೆಗಾರರು ಸಂಕಷ್ಟಕ್ಕೆ ಈಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	
(ಈ) ಹಾಗಿದ್ದಲ್ಲಿ, ಕಾಫಿ ಬೆಳೆಗಾರರ ಸಂಕಷ್ಟವನ್ನು ನಿವಾರಿಸಲು ಸರ್ಕಾರ ಯಾವುದಾದರೂ ನಿರ್ದಿಷ್ಟ ಕಾರ್ಯಕ್ರಮಗಳನ್ನು ರೂಪಿಸಿದೆಯೇ?	ಕಂದಾಯ ಇಲಾಖೆ(ವಿಪತ್ತು ನಿರ್ವಹಣೆ)ಯ ವತಿಯಿಂದ ಕೇಂದ್ರ ಸರ್ಕಾರದ SDRF/NDRF ಮಾರ್ಗಸೂಚಿಯನ್ವಯ ಕಾಫಿ ಬೆಳೆಹಾನಿಯನ್ನು ಬಹುವಾರ್ಷಿಕ ಬೆಳೆಹಾನಿಯೆಂದು ಪರಿಗಣಿಸಿ ಅತೀವೃಷ್ಟಿ ಪ್ರವಾಹದಿಂದ ಶೇ.33ಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಬೆಳೆಹಾನಿಯಾದ ಸಂತ್ರಸ್ತರಿಗೆ ಇನ್‌ಪುಟ್ ಸಬ್ಸಿಡಿಯನ್ನು ತಲಾ ಗರಿಷ್ಟ 2 ಹೆಕ್ಟೇರ್‌ಗೆ ಸೀಮಿತಗೊಳಿಸಿ ಪ್ರತಿ ಹೆಕ್ಟೇರ್‌ಗೆ ರೂ.18,000/- ರಂತೆ ಪಾವತಿಸಲಾಗುತ್ತದೆ. 2019 ನೇ ಸಾಲಿನ ಅತೀವೃಷ್ಟಿ ಪ್ರವಾಹದಿಂದ ಬೆಳೆಹಾನಿಯಾದ ಕಾಫಿ ಬೆಳೆಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಲ್ಲಿ ನಿಗಧಿಪಡಿಸಿದ ದರಕ್ಕಿಂತ ಹೆಚ್ಚುವರಿಯಾಗಿ ರೂ.10,000/-ಗಳನ್ನು ಸೇರಿಸಿ ಒಟ್ಟಾರೆ ಪ್ರತಿ ಹೆಕ್ಟೇರ್‌ಗೆ ರೂ.28,000/-ರಂತೆ ವಿಶೇಷ ಪ್ರಕರಣವೆಂದು ಪರಿಗಣಿಸಿ 2019ನೇ ಸಾಲಿನ ಪ್ರವಾಹಕ್ಕೆ ಮಾತ್ರ ಸೀಮಿತಗೊಳಿಸಿ ಪಾವತಿಸಲಾಗಿದೆ. ಇನ್‌ಪುಟ್ ಸಬ್ಸಿಡಿಯನ್ನು ಪರಿಹಾರ ತಂತ್ರಾಂಶದ ಮೂಲಕ ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆಮಾಡಲಾಗಿದೆ.

ಕಂಇ 110 ಟಿಎನ್‌ಆರ್ 2021

(ಆರ್. ಅಶೋಕ್)
ಕಂದಾಯ ಸಚಿವರು